For more job news visit : www.kpscvaani.com

ಕರ್ನಾಟಕ ಸರ್ಕಾರ
ಉಪ ನಿರ್ದೇಶಕರ ಕಛೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
1ನೇ ಮಹಡಿ 'ಬಿ ಬ್ಲಾಕ್' ರಜತಾದ್ರಿ, ಮಣಿಪಾಲ–ಉಡುಪಿ.
ದೂರವಾಣಿ ಸಂಖ್ಯೆ : 0820- 2574978 – 2574972 E Mail:wcd97udupi@gmail.com

ಸಂ:ಉನಿಉ:ಐಸಿಡಿ:ಅಂಕಾಸ:ಸಿಆರ್:2919–202020–21 ದಿನಾಂಕ:07.08.2018

ವಿಷಯ:ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ಹುದ್ದೆ ಭರ್ತಿ ಮಾಡಲು ಅರ್ಜಿ ಆಹ್ವಾನಿಸುವ ಬಗ್ಗೆ.

ಉಲ್ಲೇಖ: 1.ಸರಕಾರಿ ಆದೇಶ ಸಂ:ಮಮಇ:303:ಐಸಿಡಿ:2017 ಬೆಂಗಳೂರು. ದಿ: 23–09–2017
2.ಸರಕಾರಿ ಆದೇಶ ಸಂ:ಮಮಇ:27:ಐಸಿಡಿ:2017 ಬೆಂಗಳೂರು. ದಿ: 01.12.2017

**********

ಉಡುಪಿ ಜಿಲ್ಲೆಯ ನಾಲ್ಕು ಶಿಶು ಅಭಿವೃದ್ಧಿ ಯೋಜನೆ ವ್ಯಾಪ್ತಿಯ ಈ ಕೆಳಗೆ ಕಾಣಿಸಲಾದ ಗ್ರಾಮಗಳ ವ್ಯಾಪ್ತಿಯ ಅಂಗನವಾಡಿ ಕೇಂದ್ರಗಳಿಗೆ ಕಾರ್ಯಕರ್ತೆ ಹಾಗೂ ಸಹಾಯಕಿಯಾಗಿ ಗೌರವಸೇವೆ ಸಲ್ಲಿಸಲು ಈ ಕೆಳಗೆ ತೋರಿಸಲಾದ ಮೀಸಲಾತಿ ಹೊಂದಿದ 18 ರಿಂದ 35 ವರ್ಷದೊಳಗಿನ ಅರ್ಹ ಸ್ಥಳೀಯ (ಅದೇ ಗ್ರಾಮದ) ಮಹಿಳಾ ಅಭ್ಯರ್ಥಿಗಳಿಂದ ಮಾತ್ರ ಈ ಕೆಳಗೆ ತೋರಿಸಲಾದ ನಮೂನೆಯಲ್ಲಿ ಅರ್ಜಿ ಆಹ್ವಾನಿಸಲಾಗಿದೆ. **ಅಂ.ಕಾರ್ಯಕರ್ತೆಗೆ ಎಸ್.ಎಸ್.ಎಲ್.ಸಿ ತೇರ್ಗಡೆಯಾಗಿರಬೇಕು. ಅಂ.ಸಹಾಯಕಿಗೆ ಕನಿಷ್ಟ 4ನೇ ತರಗತಿ ತೇರ್ಗಡೆಯಾಗಿದ್ದು ಗರಿಷ್ಟ ವಿದ್ಯಾರ್ಹತೆ 9 ತರಗತಿ.** ಈ ಕೆಳಗೆ ತೋರಿಸಲಾದ ಎಲ್ಲಾ ದಾಖಲೆಗಳೊಂದಿಗೆ ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸಲು ಅಂತಿಮ ದಿನಾಂಕ :31.08.2020ರೊಳಗೆ ಅನ್ ಲೈನ್ ನಲ್ಲಿ ಅರ್ಜಿ ಸಲ್ಲಿಸಲು ಸೂಚಿಸಿದೆ.

**ಅರ್ಜಿಯೊಂದಿಗೆ ಲಗತ್ತಿಸಬೇಕಾದ ದಾಖಲೆಗಳು:**

1. ಮಾಹಿತಿಯನ್ನು ಭರ್ತಿ ಮಾಡಿದ ಅರ್ಜಿ.(ಆನ್‌ಲೈನ್)
2. ಜನನ ಪ್ರಮಾಣ ಪತ್ರ/ಜನ್ಮದಿನಾಂಕ ಇರುವ ಎಸ್.ಎಸ್.ಎಲ್.ಸಿ ಅಂಕಪಟ್ಟಿ ದಿನಾಂಕ:05–08–2020ಕ್ಕೆ 18ವರ್ಷ ತುಂಬಿರಬೇಕು 35 ವರ್ಷ ಮೀರಿರಬಾರದು
3. ತಹಶೀಲ್ದಾರರು/ ಉಪತಹಶೀಲ್ದಾರರಿಂದ ಪಡೆದ 1 ವರ್ಷದೊಳಗಿನ ವಾಸಸ್ಥಳ ದೃಢೀಕರಣ ಪತ್ರ.
4. ವಿದ್ಯಾರ್ಹತೆ ಬಗ್ಗೆ ಪ್ರಮಾಣ ಪತ್ರ. (ಕಾರ್ಯಕರ್ತೆ ಹುದ್ದೆಗೆ ಎಸ್.ಎಸ್.ಎಲ್.ಸಿ ತೇರ್ಗಡೆ ವಿದ್ಯಾರ್ಹತೆ ಬಗ್ಗೆ ಪ್ರಮಾಣ ಪತ್ರ.(ಸಹಾಯಕಿ ಹುದ್ದೆಗೆ 4ನೇ ತರಗತಿ ತೇರ್ಗಡೆ ಗರಿಷ್ಟ 9ನೇ ತರಗತಿ ತೇರ್ಗಡೆ
5. ಅಂಗನವಾಡಿ ಕಾರ್ಯಕರ್ತೆಯರ ನೇಮಕಾತಿಗಳಲ್ಲಿ ವಿಕಲಚೇತನರಿಗೆ 10 ವರ್ಷ ವಯೋಮಿತಿ ಸಡಿಲಿಕೆಯನ್ನು ನೀಡಿದೆ.
6. ಮೀಸಲಾತಿ ಅಭ್ಯರ್ಥಿಗಳ ಜಾತಿ ಪ್ರಮಾಣ ಪತ್ರ.
7. ವಿಧವೆಯರಾಗಿದ್ದಲ್ಲಿ ಪತಿಯ ಮರಣ ಪ್ರಮಾಣ ಪತ್ರ (ವಿಧವಾ ವೇತನದ ದೃಢೀಕರಣವನ್ನು ಪರಿಗಣಿಸುವುದಿಲ್ಲ).

For more job news visit : www.kpscvaani.com

8. ಆತ್ಮಹತ್ಯೆ ಮಾಡಿಕೊಂಡ ರೈತರ ಪತ್ನಿ ಆದಲ್ಲಿ ಉಪವಿಭಾಗಾಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ.
9. ಅಂಗವಿಕಲರಾಗಿದ್ದಲ್ಲಿ ಪ್ರಮಾಣ ಪತ್ರ ದೈಹಿಕ ಅಂಗವಿಕಲತೆ ಶೇ.60 ಕ್ಕಿಂತ ಕಡಿಮೆ ಇದ್ದಲ್ಲಿ ಮಾತ್ರ ಅಂ.ಕಾರ್ಯಕರ್ತೆ ಹುದ್ದೆಗೆ ಅರ್ಜಿ ಸಲ್ಲಿಸುವವರಿಗೆ ಮಾತ್ರ (ಅಂಗವಿಕಲ ವೇತನದ ದೃಢೀಕರಣವನ್ನು ಪರಿಗಣಿಸುವುದಿಲ್ಲ.)
10. ವಿಚ್ಛೇದಿತರಾಗಿದ್ದಲ್ಲಿ ಪ್ರಮಾಣ ಪತ್ರ ( ನ್ಯಾಯಾಲಯದಿಂದ ಪಡೆದಿರಬೇಕು))
11. ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವತಿಯಿಂದ ನಡೆಸಲ್ಪಟ್ಟ ಮಾಜಿ ದೇವದಾಸಿಯರ ಸಮೀಕ್ಷೆಯ ಪಟ್ಟಿಯಲ್ಲಿರುವ ಮಾಜಿ ದೇವದಾಸಿಯರ ಮಕ್ಕಳು ಆಗಿದ್ದಲ್ಲಿ ಮಹಿಳಾ ಅಭಿವೃದ್ಧಿ ನಿಗಮದ ಅಧಿಕಾರಿಗಳಿಂದ ಪ್ರಮಾಣ ಪತ್ರ
12. ಪರಿತ್ಯಕ್ತೆ ಆಗಿದ್ದಲ್ಲಿ ಸಂಬಂಧಿಸಿದ ಗ್ರಾಮ ಪಂಚಾಯತ್‌ನಿಂದ ಪಡೆದ ಪ್ರಮಾಣ ಪತ್ರ
13. ಇಲಾಖೆಯ ಸುಧಾರಣಾ ಸಂಸ್ಥೆ/ ರಾಜ್ಯ ಮಹಿಳಾ ನಿಲಯಗಳ ನಿವಾಸಿಗಳಾಗಿದ್ದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ
14. ಯೋಜನಾ ನಿರಾಶ್ರಿತರಾಗಿದ್ದಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಪಡೆದ ಪ್ರಮಾಣ ಪತ್ರ

ಉಪ ನಿರ್ದೇಶಕರು
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ಉಡುಪಿ

For more job news visit : www.kpscvaani.com

ಕರ್ನಾಟಕ ಸರ್ಕಾರ
ಉಪ ನಿರ್ದೇಶಕರ ಕಛೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
1ನೇ ಮಹಡಿ 'ಬಿ ಬ್ಲಾಕ್' ರಜತಾದ್ರಿ, ಮಣಿಪಾಲ-ಉಡುಪಿ.
ದೂರವಾಣಿ ಸಂಖ್ಯೆ : 0820- 2574978 – 2574972 E Mail:wcd97udupi@gmail.com

ಸಂ:ಉನಿಉ:ಐಸಿಡಿ:ಅಂಕಾಸ:ಸಿಆರ್:29:19-20:2020-21 ದಿನಾಂಕ:07.08.2020

## ಅಧಿಸೂಚನೆ

ಉಡುಪಿ ಜಿಲ್ಲೆಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ನಾಲ್ಕು ಶಿಶು ಅಭಿವೃದ್ಧಿ ಯೋಜನೆಗಳ ವ್ಯಾಪ್ತಿಯಲ್ಲಿ ಬರುವ ಅಂಗನವಾಡಿ ಕೇಂದ್ರಗಳಲ್ಲಿ ಖಾಲಿಯಿರುವ 14 ಅಂಗನವಾಡಿ ಕಾರ್ಯಕರ್ತೆ ಮತ್ತು 32 ಅಂಗನವಾಡಿ ಸಹಾಯಕಿಯರ ಗೌರವ ಸೇವೆಯ ಹುದ್ದೆಗಳಿಗೆ ನೇಮಕ ಮಾಡಲು ಅರ್ಹ ಮಹಿಳಾ ಅಭ್ಯರ್ಥಿಗಳಿಂದ ಆನ್-ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ.

ಕುಂದಾಪುರ ಯೋಜನೆಯ ಪುರಸಭಾ ವ್ಯಾಪ್ತಿಯ 01ನೇ ವಾರ್ಡ್ ಫೆರಿರೋಡ್ ಅಂಗನವಾಡಿ ಸಹಾಯಕಿ ಹುದ್ದೆಗೆ ಮತ್ತು ಉಡುಪಿ ಯೋಜನೆಯ ಮಲ್ಪಾರು 19ನೇ ವಾರ್ಡ್ ರಾಣ್ಯಕೇರಿ ಅಂಗನವಾಡಿ, 15ನೇ ವಾರ್ಡ್, ಮೂಳೂರು ಅಂಗನವಾಡಿ ಸಹಾಯಕಿ ಹುದ್ದೆಗೆ, ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಕನ್ನಡ ಭಾಷೆಯೊಂದಿಗೆ ಆಯಾ ಅಲ್ಪ ಸಂಖ್ಯಾತ ಸಮುದಾಯದ ಭಾಷೆ ಬಲ್ಲವರಾಗಿರಬೇಕು ಈ ಸಂಬಂಧ ಹೆಚ್ಚಿನ ವಿವರಗಳಿಗೆ ಸಂಬಂಧಪಟ್ಟ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳನ್ನು ಕಛೇರಿಯ ವೇಳೆಯಲ್ಲಿ ಸಂಪರ್ಕಿಸಲು ಕೋರಿದೆ.

ದೂರವಾಣಿ ಸಂಖ್ಯೆ: ಉಡುಪಿ:0820 2524055, ಬ್ರಹ್ಮಾವರ: 0820 2562244,
ಕುಂದಾಪುರ:08254 230807, ಕಾರ್ಕಳ: 08258 230992

| | |
|---|---|
| **ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಪ್ರಾರಂಭದ ದಿನಾಂಕ** | 07.08.2020 |
| **ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ** | 31.08.2020 |
| WEBSITE | http://udupi.nic.in |

ಉಪ ನಿರ್ದೇಶಕರು,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,
ಉಡುಪಿ